ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಸೇವಿ-1/ಅಉಆ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01.
ದಿನಾಂಕ:16-10-2023

## ಸುತ್ತೋಲೆ

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:06.10.2023.

* * * * * * *

2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಈ ರೀತಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರಲ್ಲಿ ಕೆಲವು ಅತಿಥಿ ಉಪನ್ಯಾಸಕರು ಕಾಲೇಜು ಬದಲಾವಣೆ ಬಯಸಿ ಮನವಿಗಳನ್ನು ಸಲ್ಲಿಸುತ್ತಿರುತ್ತಾರೆ.

ಈ ಹಿನ್ನಲೆಯಲ್ಲಿ, ದಿನಾಂಕ:22.09.2023 ರಿಂದ ದಿನಾಂಕ:05.10.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಕಾಲೇಜುಗಳನ್ನು ಆಯ್ಕೆ ಮಾಡಿಕೊಂಡು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಕಾಲೇಜು ಬದಲಾವಣೆ ಬಯಸುವ ಅತಿಥಿ ಉಪನ್ಯಾಸಕರು ಪ್ರಾಂಶುಪಾಲರ ಮೂಲಕ ಅರ್ಜಿ ಸಲ್ಲಿಸುವುದು. ಈ ರೀತಿ ಅರ್ಜಿ ಸಲ್ಲಿಸಿದ ಅತಿಥಿ ಉಪನ್ಯಾಸಕರುಗಳಿಗೆ ಒಂದು ಬಾರಿಯ ಕ್ರಮವಾಗಿ, ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಲಭ್ಯವಿರುವ ಕಾರ್ಯಭಾರಕ್ಕೆ ಅನುಗುಣವಾಗಿ ಆನ್‌ಲೈನ್ ಮೂಲಕ ಕೌನ್ಸಿಲಿಂಗ್ ನಡೆಸಲಾಗುವುದು.

ಕಾಲೇಜು ಬದಲಾವಣೆ ಬಯಸುವ ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ನಮೂನೆಯಲ್ಲಿ ಅರ್ಜಿಯನ್ನು **ದಿನಾಂಕ:17.10.2023 ರ ಸಂಜೆ 5:00 ಗಂಟೆ ಒಳಗಾಗಿ ಸಲ್ಲಿಸುವುದು.**

ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರು ತಮಗೆ ಅವಶ್ಯವಿದ್ದ ಕಾಲೇಜುಗಳು ಆಯ್ಕೆಯಾಗದೇ ಇದ್ದಲ್ಲಿ ಸದರಿ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿಯೇ ಮುಂದುವರೆಯಬಹುದಾಗಿದೆ. ಈ ರೀತಿ ಕಾಲೇಜು ಬದಲಾವಣೆ ಮಾಡಿಕೊಂಡ ಅತಿಥಿ ಉಪನ್ಯಾಸಕರ ಕಾರ್ಯಭಾರ/ಕಾಲೇಜನ್ನು ಮುಂದಿನ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಪ್ರದರ್ಶಿಸಲಾಗುತ್ತದೆ.

ಕಾಲೇಜು ಬದಲಾವಣೆ ಬಯಸಿ, ಬೇರೆ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು, ಸದರಿ ಕಾಲೇಜಿನಲ್ಲಿ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗಿಂತ ಕೊನೆಯವರಾಗಿರುತ್ತಾರೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

16/10/23

ಮುಖ್ಯ ಆಡಳಿತಾಧಿಕಾರಿ
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

Processed using the free version of Watermarkly. The paid version does not add this mark.